ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ: ಕೆ3/ NMMS ಪರೀಕ್ಷೆ/14/2022–23 ದಿನಾಂಕ: 07.01.2023

## ಜ್ಞಾಪನ

ವಿಷಯ:– NMMS ಪರೀಕ್ಷೆಯ ಪ್ರವೇಶ ಪತ್ರ (Admission Ticket) ಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ:– ಈ ಕಛೇರಿ ಸುತ್ತೋಲೆ ಸಂಖ್ಯೆ: ಕೆ3/ NMMS ಪರೀಕ್ಷೆ/14/2022–23, ದಿನಾಂಕ: 22.09.2022, 16.12.2022

~*~*~*~

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2022–23ನೇ ಸಾಲಿನ NMMS ಪರೀಕ್ಷೆಯನ್ನು **ದಿನಾಂಕ: 22.01.2023 ಭಾನುವಾರದಂದು** ಕೆ.ಎಸ್.ಇ.ಎ.ಬಿ.ಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತದೆ. ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳ ಪ್ರವೇಶ ಪತ್ರಗಳು (Admission Ticket) ಕೆ.ಎಸ್.ಇ.ಎ.ಬಿ ವೆಬ್‌ಸೈಟ್‌ನ NMMS Login ನಲ್ಲಿ ದಿನಾಂಕ: 09.01.2023 ರಿಂದ ಲಭ್ಯವಾಗಲಿದೆ.

- ಮಂಡಳಿಯ ಶಾಲಾ ಲಾಗಿನ್‌ನಲ್ಲಿ ದೊರೆಯುವ ಪ್ರವೇಶ ಪತ್ರಗಳನ್ನು ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು Download ಮಾಡಿಕೊಂಡು ಸಹಿ ಮಾಡಿ ಮೊಹರನ್ನು ಹಾಕಿ ದಿನಾಂಕ: 20.01.2023 ರೊಳಗೆ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ವಿತರಿಸುವುದು. ಪ್ರವೇಶ ಪತ್ರವಿಲ್ಲದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಹಾಜರುಪಡಿಸಲಾಗುವುದಿಲ್ಲ.
- ಪ್ರವೇಶ ಪತ್ರದಲ್ಲಿ ವಿದ್ಯಾರ್ಥಿಯು ಪರೀಕ್ಷೆ ಬರೆಯುವ ಕೇಂದ್ರ, ಪರೀಕ್ಷೆಯ ಹೆಸರು, ವೇಳಾಪಟ್ಟಿ ಮತ್ತು ವಿದ್ಯಾರ್ಥಿಯ ಭಾವಚಿತ್ರ ಹಾಗೂ ಇತರೆ ವಿವರಗಳು ಪೂರ್ವ ಮುದ್ರಿತವಾಗಿರುತ್ತವೆ. ಈ ಪೂರ್ವ ಮುದ್ರಿತ ಮಾಹಿತಿಗಳನ್ನು ಪರಿಶೀಲಿಸಿಕೊಂಡು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ವಿತರಿಸುವುದು ಕಡ್ಡಾಯ.
- ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವಾಗ ಯಾವ ಭಾವಚಿತ್ರವನ್ನು Upload ಮಾಡಿರುತ್ತಾರೊ ಅದೇ ಭಾವಚಿತ್ರ ಪೂರ್ವ ಮುದ್ರಿತವಾಗಿರುತ್ತದೆ. ಶಾಲಾ ಹಂತದಲ್ಲಿ ಭಾವಚಿತ್ರಗಳ ಬದಲಾವಣೆಗೆ ಅವಕಾಶವಿರುವುದಿಲ್ಲ.
- ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ನಿಗದಿಪಡಿಸಿರುವ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ಹಾಗೂ ಸೂಕ್ತ ಮಾರ್ಗದರ್ಶನವನ್ನು ಸಂಬಂಧಿಸಿದ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ನೀಡುವುದು.
- ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದು (Entry) ಮಾಡಿರುವ ಮಾಹಿತಿಗಳೇ ಪ್ರವೇಶ ಪತ್ರದಲ್ಲಿ ಪೂರ್ವ ಮುದ್ರಿತವಾಗಿರುತ್ತದೆ.
- ಬ್ಯಾಂಕ್ ಚಲನ್ ಪ್ರತಿಯನ್ನು Download ಮಾಡಿಕೊಳ್ಳದ / ಪರೀಕ್ಷಾ ಶುಲ್ಕ ಪಾವತಿಸದ ಶಾಲೆಗಳ ವಿದ್ಯಾರ್ಥಿಗಳ ಪ್ರವೇಶ ಪತ್ರವನ್ನು ತಡೆಹಿಡಿಯಲಾಗಿದ್ದು, ಈ ಕಾರಣದಿಂದ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾದಲ್ಲಿ ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರೇ ನೇರ ಹೊಣೆಗಾರರಾಗಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಮಾಹಿತಿಯನ್ನು ನೀಡಲು ಉಪನಿರ್ದೇಶಕರು (ಅಭಿವೃದ್ಧಿ), NMMS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ತಿಳಿಸಿದೆ.

7/1/2023

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು:–

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ ಸೂಕ್ತ ಕ್ರಮಕ್ಕಾಗಿ.
2. NMMS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
5. ಹಿರಿಯ ಸಹಾಯಕ ನಿರ್ದೇಶಕರು, ಗಣಕ ಶಾಖೆ, ಕೆ.ಎಸ್.ಇ.ಎ.ಬಿ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ.
6. ಕಛೇರಿ ಪ್ರತಿ.